All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
30.10.2025 07.35 a.m.
<><><><>

ಮುಖ್ಯಾಂಶಗಳು

1. ಇಂದಿನಿಂದ ಗುಜರಾತ್‌ಗೆ ಪ್ರಧಾನಿ ನರೇಂದ್ರ ಮೋದಿ ಭೇಟಿ : ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ
2. ನವದೆಹಲಿಯಲ್ಲಿಂದು ಮಾದರಿ ಯುವ ಗ್ರಾಮ ಸಭೆಗೆ ಚಾಲನೆ
3. ಬಿಹಾರ ವಿಧಾನಸಭಾ ಚುನಾವಣೆ ; ಎನ್‌ಡಿಎ, ಮಹಾಘಟಬಂಧನ್ ಮೈತ್ರಿಕೂಟದ ನಾಯಕರಿಂದ ಇಂದು ಪ್ರಚಾರ ರ್‍ಯಾಲಿ
4. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ; ಇಂಗ್ಲೆಂಡ್ ವಿರುದ್ಧ ಪಂದ್ಯ ಗೆದ್ದು ಫೈನಲ್ ಪ್ರವೇಶಿಸಿದ ದಕ್ಷಿಣ ಆಫ್ರಿಕಾ

<><><><>

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಗುಜರಾತ್ ಭೇಟಿ ಕೈಗೊಳ್ಳಲಿದ್ದಾರೆ. ಕೆವಾಡಿಯಾದ ಏಕ್ತಾ ನಗರದಲ್ಲಿಂದು ಪ್ರಧಾನಿ, ಒಂದು ಸಾವಿರದ ೧೪೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಮೂಲಸೌಕರ್ಯ ಮತ್ತು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರಾಜ್‌ಪಿಪ್ಲಾದಲ್ಲಿರುವ ಬಿರ್ಸಾ ಮುಂಡಾ ಬುಡಕಟ್ಟು ವಿಶ್ವವಿದ್ಯಾಲಯ, ವಾಮನ್ ವೃಕ್ಷ ವಾಟಿಕಾ, ಇ-ಬಸ್ ಚಾರ್ಜಿಂಗ್ ಡಿಪೋ ಮತ್ತು ೨೫ ವಿದ್ಯುತ್‌ಚಾಲಿತ ಬಸ್‌ಗಳು ಉದ್ಘಾಟನೆಗೊಳ್ಳಲಿವೆ. ಇದಲ್ಲದೆ, ಪ್ರಧಾನಿ, ಭಾರತದ ರಾಯಲ್ ಕಿಂಗ್‌ಡಮ್ಸ್ ಮ್ಯೂಸಿಯಂ, ಕ್ರೀಡಾ ಸಂಕೀರ್ಣ, ಶೂಲ್ಪನೇಶ್ವರ ಘಾಟ್ ಬಳಿಯ ಜೆಟ್ಟಿ ಅಭಿವೃದ್ಧಿ ಮತ್ತು ಏಕತಾ ಪ್ರತಿಮೆಯಲ್ಲಿ ಟ್ರಾವೆಲೇಟರ್‌ಗಳು ಸೇರಿದಂತೆ ವಿವಿಧ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ನಾಳೆ ಪ್ರಧಾನಿ, ರಾಷ್ಟ್ರೀಯ ಏಕತಾ ದಿವಸ್ ಆಚರಣೆಯಲ್ಲಿ ಭಾಗವಹಿಸಲಿದ್ದು, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಆಚರಣೆಯ ಸಂದರ್ಭದಲ್ಲಿ ಅವರು ಏಕತಾ ದಿವಸ್ ಪ್ರತಿಜ್ಞೆ ಮತ್ತು ಏಕತಾ ದಿವಸ್ ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ. ರಾಂಪುರ್ ಹೌಂಡ್ಸ್ ಮತ್ತು

ಮುಧೋಲ್ ಹೌಂಡ್ಸ್‌ನಂತಹ ಭಾರತೀಯ ತಳಿಯ ಬೇಟೆನಾಯಿಗಳನ್ನು ಒಳಗೊಂಡಿರುವ ಬಿಎಸ್‌ಎಫ್ ತುಕಡಿ ಈ ವರ್ಷದ ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿದೆ. ಇದರ ಜೊತೆಗೆ, ಆರಂಭ್ ೭.೦ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ೧೦೦ನೇ ಫೌಂಡೇಶನ್ ಕೋರ್ಸ್‌ನ ತರಬೇತಿದಾರರೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ನವದೆಹಲಿಯಲ್ಲಿಂದು ಮಾದರಿ ಯುವ ಗ್ರಾಮ ಸಭೆ-ಎಂವೈಜಿಎಸ್ ಉಪಕ್ರಮವನ್ನು ಕೇಂದ್ರ ಸರ್ಕಾರ ಪ್ರಾರಂಭಿಸಲಿದೆ. ಈ ಉಪಕ್ರಮ ಪಂಚಾಯತ್ ರಾಜ್ ಸಚಿವಾಲಯ, ಶಿಕ್ಷಣ ಸಚಿವಾಲಯ ಮತ್ತು ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಜಂಟಿ ಪ್ರಯತ್ನವಾಗಿದೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ, ಮಾದರಿ ಯುವ ಗ್ರಾಮ ಸಭೆ ಮತ್ತು ಎಂವೈಜಿಎಸ್ ಪೋರ್ಟಲ್ ಕುರಿತು ತರಬೇತಿ ಮಾದರಿಯನ್ನು ಸಹ ಅನಾವರಣಗೊಳಿಸಲಾಗುವುದು. ಈ ಉಪಕ್ರಮವನ್ನು ದೇಶಾದ್ಯಂತ ಒಂದು ಸಾವಿರಕ್ಕೂ ಹೆಚ್ಚು ಶಾಲೆಗಳಲ್ಲಿ ಜಾರಿಗೆ ತರಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ.

<><><><>

ಬಿಹಾರದಲ್ಲಿ ವಿಧಾನಸಭಾ ಚುನಾವಣೆಗೆ ಪ್ರಚಾರ ಮತ್ತಷ್ಟು ತೀವ್ರಗೊಂಡಿದ್ದು, ನಿನ್ನೆ ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತ್ತು ಸ್ಟಾರ್ ಪ್ರಚಾರಕರು ರಾಜ್ಯಾದ್ಯಂತ ಸರಣಿ ರ್‍ಯಾಲಿಗಳನ್ನು ನಡೆಸಿದ್ದಾರೆ. ಇಂದು, ಪ್ರಧಾನಿ ನರೇಂದ್ರ ಮೋದಿ ಮತ್ತು ಹಿರಿಯ ಬಿಜೆಪಿ ನಾಯಕರು ಬಿಹಾರದ ಮುಜಫರ್‌ಪುರ ಮತ್ತು ಛಪ್ರಾದಲ್ಲಿ ಚುನಾವಣಾ ರ್‍ಯಾಲಿಗಳನ್ನು ನಡೆಸಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಇಂದು ಪಾಟ್ನಾದಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ. ಇದೇ ವೇಳೆ, ಮುಜಫರ್‌ಪುರದಿಂದ ಕಾಂಗ್ರೆಸ್‌ನ ಹಿರಿಯ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನಿನ್ನೆ ತಮ್ಮ ಚುನಾವಣಾ ಪ್ರಚಾರ ಪ್ರಾರಂಭಿಸಿದರು. ಮುಜಫರ್‌ಪುರದ ಸಕ್ರಾದಲ್ಲಿ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಬಿಜೆಪಿಗೆ ಸಾಮಾಜಿಕ ನ್ಯಾಯದ ಬಗ್ಗೆ ಯಾವುದೇ ಕಾಳಜಿ ಇಲ್ಲ ಅದಕ್ಕಾಗಿಯೇ ಪ್ರಧಾನಿ ನರೇಂದ್ರ ಮೋದಿ ಜಾತಿ ಜನಗಣತಿಯನ್ನು ವಿರೋಧಿಸಿದರು ಎಂದು ಆರೋಪಿಸಿದರು. ಬಿಹಾರದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವುದು ಮತ್ತು ಅಧಿಕಾರಕ್ಕೆ ಬಂದರೆ ರಾಜ್ಯದ ಜನರಿಗೆ

ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಮಹಾಘಟಬಂಧನ್ ಗುರಿಯಾಗಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

<><><>

ಹರಿಯಾಣದ ಅಂಬಾಲ-ಕುರುಕ್ಷೇತ್ರದಲ್ಲಿ ರಫೇಲ್ ವಿಮಾನ ಹಾರಾಟ ನಡೆಸಿದ ತಮ್ಮ ಅನುಭವವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಹಂಚಿಕೊಂಡಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿಗಳು, ಇದು ತಮಗೆ ಮರೆಯಲಾಗದ ಅನುಭವ. ಪ್ರಾಚೀನ ಭೂಮಿ ಮತ್ತು ಬ್ರಹ್ಮ ಸರೋವರ ಭಾರತದ ಸಾಂಸ್ಕೃತಿಕ ವೈವಿಧ್ಯತೆ ಮತ್ತು ಐತಿಹಾಸಿಕ ಪ್ರಯಾಣದ ಸಂಕೇತವಾಗಿದೆ. ದೇಶದ ಮಿಲಿಟರಿ ಸಾಮರ್ಥ್ಯದ ಮೇಲಿನ ತಮ್ಮ ನಂಬಿಕೆ ಹೆಚ್ಚು ದೃಢವಾಗಿದೆ ಎಂದು ಹೇಳಿದ್ದಾರೆ.

<><><>

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಸ್ಮರಣಾರ್ಥ ನಾಳೆ ದೇಶಾದ್ಯಂತ ಏಕತೆಗಾಗಿ ಓಟವನ್ನು ಆಯೋಜಿಸಲಾಗುತ್ತಿದೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ದೇಶವಾಸಿಗಳನ್ನು ಈ ಓಟದಲ್ಲಿ ಭಾಗವಹಿಸುವಂತೆ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಮತ್ತು ಅವರ ಏಕೀಕೃತ ಭಾರತದ ದೃಷ್ಟಿಕೋನವನ್ನು ಗೌರವಿಸುವಂತೆ ಕೋರಿದ್ದಾರೆ.

<><><>

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಈ ರಾಷ್ಟ್ರಕ್ಕೆ ಒಂದು ಪರಂಪರೆ, ಕಲ್ಪನೆ ಮತ್ತು ಸಂಸ್ಥೆಯಾಗಿದ್ದಾರೆ. ದೇಶದ ನಾಗರಿಕರು, ವಿಶೇಷವಾಗಿ ಯುವಕರು, ವಿಕಸಿತ ಭಾರತವನ್ನು ನಿರ್ಮಿಸಲು ಅವರ ಜೀವನದಿಂದ ಸ್ಫೂರ್ತಿ ಪಡೆಯಬೇಕು ಎಂದು ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವಿಯ ಒತ್ತಾಯಿಸಿದರು. ನವದೆಹಲಿಯ ಆಕಾಶವಾಣಿ ಭವನದಲ್ಲಿ ನಿನ್ನೆ ಸರ್ದಾರ್ ಪಟೇಲ್ ಸ್ಮಾರಕ ಉಪನ್ಯಾಸ -೨೦೨೫ ಉದ್ದೇಶಿಸಿ ಮಾತನಾಡಿದ ಅವರು, ಜಮ್ಮು ಮತ್ತು ಕಾಶ್ಮೀರದಲ್ಲಿ ೩೭೦ನೇ ವಿಧಿಯನ್ನು ತೆಗೆದುಹಾಕುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು, ಸರ್ದಾರ್ ಪಟೇಲ್ ಅವರ ಅಪೂರ್ಣ ಕೆಲಸವನ್ನು ಪೂರ್ಣಗೊಳಿಸುತ್ತಿದ್ದಾರೆ ಎಂದು ಹೇಳಿದರು.

ಧ್ವನಿ : ಮನ್ಸುಖ್ ಮಾಂಡವೀಯಾ ( ೧೮ ಸೆಕೆಂಡ್‌ಗಳು)

ಭಾರತದ ಮೊದಲ ವಾರ್ತಾ ಮತ್ತು ಪ್ರಸಾರ ಸಚಿವರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಗೌರವಾರ್ಥವಾಗಿ, ಆಕಾಶವಾಣಿಯಲ್ಲಿ ವಾರ್ಷಿಕ ಸರ್ದಾರ್ ಪಟೇಲ್ ಸ್ಮಾರಕ ಉಪನ್ಯಾಸವನ್ನು ಆಯೋಜಿಸಲಾಗಿದೆ.

<><><><>

ಸಾಗರ ವಲಯವು ಭಾರತದ ಬೆಳವಣಿಗೆಗೆ ಚಾಲನೆ ನೀಡುತ್ತಿದೆ. ಕಳೆದ ದಶಕದಲ್ಲಿ, ಈ ವಲಯವು ಗಮನಾರ್ಹವಾಗಿ ರೂಪಾಂತರಗೊಂಡಿದೆ, ವ್ಯಾಪಾರ ಮತ್ತು ಬಂದರು ಮೂಲಸೌಕರ್ಯವನ್ನು ಹೆಚ್ಚಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನ ನೆಸ್ಕೋ ಪ್ರದರ್ಶನ ಕೇಂದ್ರದಲ್ಲಿ ನಿನ್ನೆ ಭಾರತ ಸಾಗರ ಸಪ್ತಾಹ - ೨೦೨೫ ರ ಅಡಿಯಲ್ಲಿ ಆಯೋಜಿಸಲಾದ ಸಾಗರ ನಾಯಕರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಸಾಗರ ವಲಯವು ಹೆಚ್ಚಿನ ವೇಗ ಮತ್ತು ಶಕ್ತಿಯೊಂದಿಗೆ ಮುಂದುವರಿಯುತ್ತಿದೆ. ಭಾರತದ ಬಂದರುಗಳು ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಅತ್ಯಂತ ಪರಿಣಾಮಕಾರಿ ಎಂದು ಪರಿಗಣಿಸಲ್ಪಟ್ಟಿವೆ. ಅನೇಕ ಅಂಶಗಳಲ್ಲಿ, ಅವು ಅಭಿವೃದ್ಧಿ ಹೊಂದಿದ ರಾಷ್ಟ್ರಗಳಿಗಿಂತ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ಹೇಳಿದರು. ಜಾಗತಿಕ ಉದ್ವಿಗ್ನತೆ, ವ್ಯಾಪಾರ ಅಡಚಣೆಗಳು ಮತ್ತು ಬದಲಾಗುತ್ತಿರುವ ಪೂರೈಕೆ ಸರಪಳಿಗಳ ನಡುವೆ, ಭಾರತವು ಕಾರ್ಯತಂತ್ರದ ಸ್ವಾಯತ್ತತೆ, ಶಾಂತಿ ಮತ್ತು ಅಂತರ್ಗತ ಬೆಳವಣಿಗೆಯ ಸಂಕೇತವಾಗಿ ನಿಂತಿದೆ ಎಂದು ಪ್ರಧಾನಿ ಮೋದಿ ತಿಳಿಸಿದರು.

<><><><>

೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಐಎಫ್‌ಎಫ್‌ಐ - ೨೦೨೫ ನವೆಂಬರ್ ೨೦ ರಿಂದ ೨೮ ರವರೆಗೆ ಗೋವಾದ ಪಣಜಿಯಲ್ಲಿ ನಡೆಯಲಿದೆ. ಮಾನ್ಯತೆ ಪಡೆದ ಮಾಧ್ಯಮ ವೃತ್ತಿಪರರು ಚಲನಚಿತ್ರ ಪ್ರದರ್ಶನಗಳು, ಚರ್ಚೆಗಳು, ಮಾಸ್ಟರ್‌ಕ್ಲಾಸ್‌ಗಳು ಮತ್ತು ಪ್ರಪಂಚದಾದ್ಯಂತದ ಪ್ರಸಿದ್ಧ ಚಲನಚಿತ್ರ ನಿರ್ಮಾಪಕರು ಮತ್ತು ಕಲಾವಿದರೊಂದಿಗೆ ನೆಟ್‌ವರ್ಕಿಂಗ್ ಅವಧಿಗಳಿಗೆ ವಿಶೇಷ ಪ್ರವೇಶವನ್ನು ಹೊಂದಿರುತ್ತಾರೆ.

<><><><>

ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ನಿನ್ನೆ ೫೯ ಮಾವೋವಾದಿಗಳು ಶರಣಾಗಿದ್ದಾರೆ. ಈ ಮಾವೋವಾದಿಗಳು ರಾಜ್ಯ ಸರ್ಕಾರದ "ಪೂನಾ ಮಾರ್ಗಯೆಮ್" ಅಂದರೆ "ಪುನರ್ವಸತಿ

ಮೂಲಕ ಪುನರುಜ್ಜೀವನ" ಎಂಬ ಪುನರ್ವಸತಿ ಉಪಕ್ರಮದಿಂದ ಪ್ರಭಾವಿತರಾಗಿದ್ದಾರೆ. ಈ ಮಾವೋವಾದಿಗಳಿಗಾಗಿ ಒಟ್ಟು ೬೬ ಲಕ್ಷ ರೂಪಾಯಿಗಳ ಬಹುಮಾನವನ್ನು ಘೋಷಿಸಲಾಗಿತ್ತು.

<><><><>

ಒಡಿಶಾದಲ್ಲಿ, ಚಂಡಮಾರುತ ಮೊಂಥಾ ೩೩ ತಾಲೂಕುಗಳು ಮತ್ತು ೧೧ ನಗರ ಪ್ರದೇಶಗಳ ಮೇಲೆ ಪರಿಣಾಮ ಬೀರಿದೆ. ರಾಜ್ಯ ಸರ್ಕಾರವು ೩೬೨ ಉಚಿತ ಅಡುಗೆಮನೆಗಳನ್ನು ಸ್ಥಾಪಿಸಿದೆ. ಅಲ್ಲಿ ಚಂಡಮಾರುತ ಕೇಂದ್ರಗಳಲ್ಲಿ ಆಶ್ರಯ ಪಡೆದಿರುವ ೧೮ ಸಾವಿರದ ೭೬೨ ಜನರಿಗೆ ಬೇಯಿಸಿದ ಆಹಾರವನ್ನು ಒದಗಿಸಲಾಗುತ್ತಿದೆ. ಚಂಡಮಾರುತ ಮೊಂಥಾದಿಂದ ಮನೆಗಳು, ರಸ್ತೆಗಳು ಮತ್ತು ಇತರೆ ಸಾರ್ವಜನಿಕ ಮೂಲಸೌಕರ್ಯಗಳಿಗೆ ಉಂಟಾದ ಹಾನಿಯನ್ನು ಇಂದಿನಿಂದ ನಿರ್ಣಯಿಸಲು ಸಹ ನಿರ್ಧರಿಸಿದೆ. ಹಾನಿಗೊಳಗಾದ ಸ್ಥಳಗಳಲ್ಲಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆಯ ಸಹಾಯದಿಂದ ಪರಿಹಾರ ಕಾರ್ಯ ನಡೆಯುತ್ತಿದೆ.

<><><><>

ಗುವಾಹಟಿಯ ಬರ್ಸಾಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಮೊದಲ ಸಮಿಫೈನಲ್ಸ್‌ನಲ್ಲಿ ಇಂಗ್ಲೆಡ್ ವಿರುದ್ಧ ದಕ್ಷಿಣ ಆಫ್ರಿಕಾ ವನಿತಾ ತಂಡ ೧೨೫ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಈ ಮೂಲಕ ಫೈನಲ್‌ಗೆ ಲಗ್ಗೆ ಇಟ್ಟಿದೆ. ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ, ನಿಗದಿತ ೫೦ ಓವರ್‌ಗಳಿಗೆ ೭ ವಿಕೆಟ್‌ಗಳಿಗೆ ೩೧೯ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಇಂಗ್ಲೆಡ್, ೪೨.೩ ಓವರ್‌ಗಳಿಗೆ ೧೯೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ನವಿ ಮುಂಬೈನ ಡಾ.ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಇಂದು ನಡೆಯುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎರಡನೇ ಸಮಿಫೈನಲ್ಸ್‌ನಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>